**<u>ಮಧ್ಯಂತರ ಅರ್ಜಿಗಳ ಮೇಲೆ ಆದ ಆದೇಶದ ಮೇರೆಗೆ ಸಾಕ್ಷಿಗೆ ದಿನಾಂಕ 05-08-2023 ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು</u>**

**<u>ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ.ಇ.ಸಿ ವಕೀಲರಿಂದ</u>**

ಪ್ರತಿವಾದಿ ಕ್ರೈಸ್ತ ಧರ್ಮಕ್ಕೆ ಸೇರಿದವನು ಎಂದರೆ ಸರಿ. ಪ್ರತಿವಾದಿಯ ಕುಟುಂಬದಲ್ಲಿ ತಂದೆ, ತಾಯಿ ಮತ್ತು ಮಗ ಇರುತ್ತಾರೆ ಎಂದರೆ ಸರಿ. ಖರೀದಿ ಪತ್ರಕ್ಕೆ ಪ್ರತಿವಾದಿಯ ತಾಯಿ ಕಮಲಾಬಾಯಿಯು ಸಹಿಯನ್ನು ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಸದರಿ ದಿನ ಕಮಲಾಬಾಯಿಯವರು ಇರಲಿಲ್ಲ, ರಾಜಪ್ಪಾ ಎಂಬುವವನು ಖರೀದಿ ಪತ್ರ ನೊಂದಣಿ ಮಾಡುವಾಗ ಬಂದಿದ್ದನು ಎಂದು ನುಡಿಯುತ್ತಾರೆ.

ಪ್ರತಿವಾದಿಯ ಮಗನು ಸಹ ಸದರಿ ಖರೀದಿ ಪತ್ರಕ್ಕೆ ಸಹಿ ಹಾಕಿರುವುದಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು, ನಾನು ರಾಜಪ್ಪನ ಕಡೆಯಿಂದ ದಾವಾ ಆಸ್ತಿಯನ್ನು ಖರೀದಿಗೆ ತೆಗೆದುಕೊಂಡಿದ್ದೇನು ಎಂದು ನುಡಿಯುತ್ತಾರೆ. ಪ್ರತಿವಾದಿಯ ತಂದೆ 1983 ನೇ ಇಸ್ವಿಯಲ್ಲಿ ಮರಣಹೊಂದಿರುತ್ತಾನೆ ಎಂದರೆ ಸಾಕ್ಷಿಯು ಖರೀದಿ ಪತ್ರ ನೊಂದಣಿಯಾದ 5-6 ವರ್ಷಗಳ ನಂತರ ಸದರಿ ರಾಜಪ್ಪಾ ಮರಣಹೊಂದಿರುತ್ತಾನೆ ಎಂದು ನುಡಿಯುತ್ತಾರೆ.

ಪ್ರತಿವಾದಿಯ ತಂದೆ ಖರೀದಿ ಪತ್ರಕ್ಕೆ ಸಹಿಯನ್ನು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಖರೀದಿ ಪತ್ರದಲ್ಲಿರುವ ರಾಜಪ್ಪನ ಸಹಿ ನಕಲಿ ಸಹಿ ಆಗಿರುತ್ತದೆ ಎಂದರೆ ಸರಿಯಲ್ಲ.

ಪ್ರತಿವಾದಿಯು ದಾವಾ ಆಸ್ತಿಯನ್ನು ತನ್ನ ಹೆಸರಿಗೆ ವರ್ಗಾಯಿಸಿದಂತೆ ಅರ್ಜಿ ನೀಡಿದಾಗ ನಾನು ಸದರಿ ಅರ್ಜಿಗೆ ತಕರಾರು ಹಾಕಿರುವುದಿಲ್ಲ ಎಂದರೆ ಸರಿಯಲ್ಲ. ಸಹಾಯಕ ಆಯುಕ್ತರು ಪ್ರತಿವಾದಿ ಪರ ಆದೇಶ ಮಾಡಿದ್ದು, ಅದರ ವಿರುದ್ಧ ನಾನು ಮೇಲ್ಮನವಿ ಸಲ್ಲಿಸಿರುವುದಿಲ್ಲ ಎಂದರೆ

ಸರಿಯಲ್ಲ. ಭೂಮಾಪಕರು ಸದರಿ ದಾವಾ ಆಸ್ತಿಯ ಸರ್ವೆ ಮಾಡಿದ್ದು, ಫಾರಂ ನಂ: 10 ಅನ್ನು ಪ್ರತಿವಾದಿಯ ಹೆಸರಿನಲ್ಲಿ ನೀಡಿರುತ್ತಾರೆ ಎಂದರೆ ಸರಿಯಲ್ಲ. ಫಾರಂ ನಂ: 10 ರ ವಿರುದ್ದ ನಾನು ಮೇಲ್ಮನವಿ ಸಲ್ಲಿಸಿರುವುದಿಲ್ಲ ಎಂದರೆ ಸರಿಯಲ್ಲ.

1998 ನೇ ಇಸ್ವಿಯಿಂದ ಇಲ್ಲಿಯವರೆಗೂ ಪ್ರತಿವಾದಿಯ ದಾವಾ ಆಸ್ತಿಯಲ್ಲಿ ಸಾಗುವಳಿ ಮಾಡುತ್ತಿದ್ದಾನೆ ಎಂದರೆ ಸರಿಯಲ್ಲ. ಪ್ರತಿವಾದಿಯು ಸರ್ಕಾರಿ ನೌಕರನಾಗಿದ್ದ ಎಂದರೆ ಸರಿ. ಪ್ರತಿವಾದಿಯು ಕಲಬುರಗಿಯ ನೀರಾವರಿ ಇಲಾಖೆಯಲ್ಲಿ ಪಂಪ ಆಪರೇಟರ ಆಗಿ ಕೆಲಸ ಮಾಡುತ್ತಿದ್ದನು ಎಂದರೆ ನನಗೆ ಗೊತ್ತಿರುವುದಿಲ್ಲ.

ಪ್ರತಿವಾದಿಯು ತಾನು ಬೇರೆ ಕಡೆ ನೌಕರಿ ಮಾಡುತ್ತಿದ್ದು, ಆತನು ತನ್ನ ಊರಿಗೆ ಇರದೇ ಇರುವ ಸಂಧರ್ಭ ಉಪಯೋಗಿಸಿಕೊಂಡು ನಾನು ಒಂದು ಖೊಟ್ಟಿ ಖರೀದಿ ಪತ್ರವನ್ನು ತಯ್ಯಾರಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

ದಾವಾ ಆಸ್ತಿಯು ಪ್ರತಿವಾದಿಯ ಪಿತ್ರಾರ್ಜಿತ ಆಸ್ತಿ ಎಂದರೆ ಸಾಕ್ಷಿಯು ಸದರಿ ಆಸ್ತಿಯನ್ನು ನಾನು ರಾಜಪ್ಪನ ಕಡೆಯಿಂದ ಖರೀದಿ ಮಾಡಿಕೊಂಡಿರುತ್ತೇನೆ ಎಂದು ನುಡಿಯುತ್ತಾರೆ.

ಋಣಭಾರ ರಹಿತ ಪ್ರಮಾಣ ಪತ್ರದಲ್ಲಿ ಪ್ರತಿವಾದಿಯ ಹೆಸರು ನಮೂದಾಗಿರುತ್ತದೆ ಎಂದರೆ ಸರಿಯಲ್ಲ. ಪ್ರತಿವಾದಿಯ ಆಸ್ತಿಯನ್ನು ಕಬಳಿಸಬೇಕೆಂದು ನಾನು ಸುಳ್ಳು ದಾಖಲೆಗಳನ್ನು ಸೃಷ್ಠಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಸ್ವಾಧೀನವನ್ನು ಪ್ರತಿವಾದಿಯೇ ಹೊಂದಿರುತ್ತಾನೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನಾನೇ ದಾವಾ ಆಸ್ತಿಯ ಸ್ವಾಧೀನ ಹೊಂದಿರುತ್ತೇನೆ ಎಂದು ನುಡಿಯುತ್ತಾರೆ.

ನಾನು ನ್ಯಾಯಾಲಯಕ್ಕೆ ಸುಳ್ಳು ದಾಖಲಾತಿಗಳನ್ನು ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು, ಚಿತ್ತಾಪೂರ.